# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ) ರವರ ಕಛೇರಿ, ಎನ್.ಆರ್.ವೃತ್ತ, ಬೆಂಗಳೂರು –02.**

ಸಂಖ್ಯೆ: ಜಂನಿನಯೋ (ದ)/ಪ್ರಾ.ಪ/ಸನಿ/ 08 /2022–23 ದಿನಾಂಕ: 20–08–2022.

**ಭಾಗಶಃ ಪ್ರಾರಂಭಿಕ ಪ್ರಮಾಣ ಪತ್ರ**

**ವಿಷಯ:** ಆಸ್ತಿ ಸಂಖ್ಯೆ 01/1, ಪಿ.ಐ.ಡಿ ಸಂಖ್ಯೆ 31-42-1/1, ಹೊಸಕೆರೆ ರಸ್ತೆ, ಬಿನ್ನಿಪೇಟೆ, ಪಶ್ಚಿಮ ವಲಯ, ವಾರ್ಡ್ ಸಂಖ್ಯೆ 121, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ಫೇಸ್ III ಟವರ್–09 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ (ಭಾಗಶಃ) ನೀಡುವ ಬಗ್ಗೆ.

**ಉಲ್ಲೇಖ:** 1) ತಮ್ಮ ಮನವಿ ಪತ್ರ ದಿನಾಂಕ: 22-06-2022.

2) ಕಟ್ಟಡದ ಪರಿಷ್ಕೃತ ನಕ್ಷೆ ಮಂಜೂರಾತಿ ಎಲ್.ಪಿ ಸಂಖ್ಯೆ: JDTP (S) / LP 31/10-11 ದಿನಾಂಕ: 12–03–2020.

3) ಅಪರ ನಿರ್ದೇಶಕರು, ನಗರ ಯೋಜನೆ ರವರ ಅನುಮೋದನೆ ದಿನಾಂಕ: 11-08-2022.

*****

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಮನವಿಯನ್ವಯ ಆಸ್ತಿ ಸಂಖ್ಯೆ 01/1, ಪಿ.ಐ.ಡಿ ಸಂಖ್ಯೆ 31-42-1/1, ಹೊಸಕೆರೆ ರಸ್ತೆ, ಬಿನ್ನಿಪೇಟೆ, ಪಶ್ಚಿಮ ವಲಯ, ವಾರ್ಡ್ ಸಂಖ್ಯೆ 121, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ ಫೇಸ್ III ಟವರ್–09 ರಲ್ಲಿ 2ತಳ + ನೆಲ + ಮೇಲಿನ 32 ಅಂತಸ್ತುಗಳ 219 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕಛೇರಿಯಿಂದ ಎಲ್.ಪಿ. ಸಂಖ್ಯೆ: JDTP (S) / LP 31/10-11 ದಿನಾಂಕ: 12–03–2020 ರಂದು ಪರಿಷ್ಕೃತ ನಕ್ಷೆ ಮಂಜೂರಾತಿಯನ್ನು ಉಲ್ಲೇಖ (2) ರಂತೆ ಅನುಮೋದನೆಯನ್ನು ನೀಡಲಾಗಿರುತ್ತದೆ.

ಅದರನ್ವಯ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ (ಭಾಗಶಃ) ನೀಡುವ ಸಲುವಾಗಿ ಉಲ್ಲೇಖ (3) ರಂತೆ ಅಪರ ನಿರ್ದೇಶಕರು, ನಗರ ಯೋಜನೆ ರವರ ಅನುಮೋದನೆ ಮೇರೆಗೆ ಪ್ರಾರಂಭಿಕ ಪ್ರಮಾಣ ಪತ್ರ (ಭಾಗಶಃ) ನೀಡುವ ಸಂಬಂಧ ಅಗತ್ಯ ಶುಲ್ಕವಾದ ರೂ. 1,74,000/– ಗಳನ್ನು ಅರ್ಜಿದಾರರಿಂದ ರಸೀದಿ ಸಂಖ್ಯೆ: RE-ifms624-TP/000033 ದಿನಾಂಕ: 19-08-2022 ರಂದು ಸಂದಾಯಿಸಿಕೊಳ್ಳಲಾಗಿದೆ. ಆದುದರಿಂದ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ (ಭಾಗಶಃ) ವನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ಅನುಮತಿ ನೀಡಲಾಗಿದೆ.

1) ಕಟ್ಟಡ ಕಾಮಗಾರಿಯನ್ನು ಪರಿಷ್ಕೃತ ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಕಛೇರಿಗೆ ಮಾಹಿತಿಯನ್ನು ನೀಡಿ ಪರಿಷ್ಕೃತ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
3) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ–ಪಕ್ಕದವರಿಗೆ ತೊಂದರೆಯಾಗದಂತೆ ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
4) ಪರಿಷ್ಕೃತ ನಕ್ಷೆ ಮಂಜೂರಾತಿ ಪಡೆದ ದಿನಾಂಕದಿಂದ ಐದು ವರ್ಷದೊಳಗಾಗಿ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.
5) ಕಟ್ಟಡ ನಿರ್ಮಾಣ ಮತ್ತು ಕಟ್ಟಡ ತೆರವಿನ ತ್ಯಾಜ್ಯದ ನಿರ್ವಹಣೆ ಮತ್ತು ವಿಲೇವಾರಿಯನ್ನು ಮಾಡಲು ಘನತ್ಯಾಜ್ಯ ನಿರ್ವಹಣೆ (ಎಸ್.ಡಬ್ಲ್ಯೂ.ಎಂ) ಉಪನಿಯಮ 2016 ರಂತೆ ನಿರ್ವಹಿಸುವುದು.

20/08/22

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



20/8/22 20/08 20/8

6) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಸಂಸ್ಕರಿಸಿದ (Treated Water Utilisation for Construction) ನೀರನ್ನು ಕಟ್ಟಡ ನಿರ್ಮಾಣ ಕಾರ್ಯಕ್ಕೆ ಕಡ್ಡಾಯವಾಗಿ ಒಳಸಿಕೊಳ್ಳುವುದು.

7) ಅರ್ಜಿದಾರರು ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳನ್ನು ಅಳವಡಿಸಲು ಅಗತ್ಯ ಕ್ರಮವಹಿಸುವುದು.

8) ಅರ್ಜಿದಾರರು ಪ್ರತಿ 240.00 ಚ.ಮೀ ಅನುಪಾತ ವಿಸ್ತೀರ್ಣಕ್ಕೆ ಒಂದರಂತೆ ಗಿಡವನ್ನು ನೆಡುವುದು.

ಸಹಿ/-

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ

M/s. ETA Karnataka Estates Ltd.,
and M/s. ETA Star Infopark & their GPA Holder
M/s. Relationship Properties Pvt. Ltd.,
Rep. by Sri. Ananda Rao.C.B
# 1/1, Binny Mill Road, Binnypet,
Bangalore – 560 023.

**ಪ್ರತಿಯನ್ನು:** ಕಾರ್ಯಪಾಲಕ ಅಭಿಯಂತರರು (ಗಾಂಧಿನಗರ ವಲಯ) ವಿಭಾಗ/ ಸಹಾಯಕ ಕಾರ್ಯಪಾಲಕ ಅಭಿಯಂತರರು, ಕಾಟನ್‌ಪೇಟೆ ಉಪ ವಿಭಾಗ ರವರಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ.

20/08/22

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

20/8/22 20/08